**Akashvani : Bangalore**
**Regional Bulletin In Kannada**
**09.06.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**09.06.2025 / 18.40 hrs**

**<><*<><>*><>**

ಮುಖ್ಯಾಂಶಗಳು

**೧. ಎಫ್‌ಐಆರ್ ರದ್ದು ಕೋರಿ ಹೈಕೋರ್ಟ್ ಮೊರೆಹೋದ ರಾಯಲ್ ಚಾಲೆಂಜರ್ಸ್ ಬೆಂಗಳೂರು**

**೨. ಕಾಲ್ತುಳಿತ ಪ್ರಕರಣದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಪರಿಹಾರ ವಿತರಣೆ**

**೩. ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ**

**೪. ಅಮೃತ್ ಮಿತ್ರ ಯೋಜನೆಗೆ ಕೋಲಾರ ಜಿಲ್ಲೆಯ ಕರುಗಲ್ ಪಟ್ಟಣ ಪಂಚಾಯಿತಿ ಆಯ್ಕೆ**

**<><*<><>*><>**

ಆರ್‌ಸಿಬಿ ವಿಜಯೋತ್ಸವದ ಆಚರಣೆ ಸಂದರ್ಭದಲ್ಲಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಅನ್ನು ರದ್ದುಗೊಳಿಸುವಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಅದರ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ, ರಾಜ್ಯ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಈವೆಂಟ್ ಮ್ಯಾನೇಜ್‌ಮೆಂಟ್ ಸಂಸ್ಥೆ, ಕರ್ನಾಟಕ ರಾಜ್ಯ ಕ್ರಿಕೆಟ್ ಅಕಾಡೆಮಿ ಮತ್ತು ಇತರೆ ಅಧಿಕಾರಿಗಳೊಂದಿಗೆ ವ್ಯಾಪಕ ಚರ್ಚೆ ನಡೆದ ನಂತರ, ರಾಯಲ್ ಚಾಲೆಂಜರ್ಸ್ ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್, ಪ್ರಸ್ತಾವಿತ ವಿಜಯೋತ್ಸವ ಆಚರಣೆಯ ಘೋಷಣೆ ಮಾಡಿದೆ ಎಂದು ಅವರು ತಮ್ಮ ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ. ವಿಜಯೋತ್ಸವ ಮೆರವಣಿಗೆಗೆ ಪೊಲೀಸರು ಅನುಮತಿ ನಿರಾಕರಿಸಿರುವ ಕುರಿತು ಜೂನ್ ೪ರ ಬೆಳಗ್ಗೆ, ಆರ್‌ಸಿಬಿ ಅಧಿಕಾರಿಗಳಿಗೆ ಮೌಖಿಕವಾಗಿ ತಿಳಿಸಲಾಯಿತು. ಅದೇ ಸಮಯದಲ್ಲಿ, ಕರ್ನಾಟಕದ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳು, ವಿಧಾನಸೌಧದಲ್ಲಿ ವಿಜೇತ ಆರ್‌ಸಿಬಿಯನ್ನು ಅಭಿನಂದಿಸಲು ಯೋಜಿಸುತ್ತಿದ್ದಾರೆ ಎಂಬ ಅಂಶವನ್ನು ಆರ್‌ಸಿಬಿ ಅಧಿಕಾರಿಗಳಿಗೆ ತಿಳಿಸಲಾಯಿತು. ಸನ್ಮಾನಕ್ಕಾಗಿ ಆರ್‌ಸಿಬಿ ಆಟಗಾರರು ಮತ್ತು ಸಿಬ್ಬಂದಿಯನ್ನು ವಿಧಾನಸೌಧಕ್ಕೆ ಆಹ್ವಾನಿಸಿದ್ದಲ್ಲದೆ,

ಸಾರ್ವಜನಿಕರನ್ನು ಸಹ ಮುಖ್ಯಮಂತ್ರಿಗಳು ಆಹ್ವಾನಿಸಿದ್ದರು ಎಂದು ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದಲ್ಲಿ ಮೃತಪಟ್ಟಿದ್ದ ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದ ಅಕ್ಷತಾ ಪೈ ಅವರ ಕುಟುಂಬಕ್ಕೆ ರಾಜ್ಯ ಸರಕಾರದಿಂದ ನೀಡಲಾದ ೨೫ ಲಕ್ಷ ರೂಪಾಯಿ ಪರಿಹಾರದ ಚೆಕ್ ಅನ್ನು ಶಿರಸಿ ಕ್ಷೇತ್ರದ ಶಾಸಕ ಭೀಮಣ್ಣ ನಾಯ್ಕ ಹಾಗೂ ಜಿಲ್ಲಾಧಿಕಾರಿ ಕೆ.ಲಕ್ಷ್ಮೀ ಪ್ರಿಯಾ ವಿತರಿಸಿದರು. ಸಿದ್ದಾಪುರದ ಮೃತರ ಮನೆಗೆ ತೆರಳಿ, ಮೃತರ ಕುಟುಂಬಕ್ಕೆ ಪರಿಹಾರದ ಚೆಕ್ ವಿತರಿಸಿ, ಸಾಂತ್ವನ ಹೇಳಿದರು. ಇನ್ನೊಂದೆಡೆ, ಕಾಲ್ತುಳಿತಕ್ಕೆ ಸಿಲುಕಿ ಮೃತಪಟ್ಟ ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕಿನ ರಾಯಸಮುದ್ರ ಗ್ರಾಮದ ಪೂರ್ಣಚಂದ್ರ ಕುಟುಂಬಕ್ಕೆ ರಾಜ್ಯ ಸರಕಾರದಿಂದ ನೀಡಲಾದ ೨೫ ಲಕ್ಷ ರೂಪಾಯಿಗಳ ಚೆಕ್ ಅನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ವಿತರಿಸಿದರು. ಈ ಸಂದರ್ಭದಲ್ಲಿ ಶಾಸಕ ಹೆಚ್.ಟಿ.ಮಂಜು, ಜಿಲ್ಲಾಧಿಕಾರಿ ಡಾ.ಕುಮಾರ, ತಹಸೀಲ್ದಾರ್ ಅಶೋಕ್ ಉಪಸ್ಥಿತರಿದ್ದರು. ಇದೇ ವೇಳೆ ಕಾಲ್ತುಳಿತ್ತಕ್ಕೆ ಬಲಿಯಾದ ಯಾದಗಿರಿ ಜಿಲ್ಲೆಯ ಹೊನಗೇರಾದ ಶಿವಲಿಂಗ ಅವರ ಕುಟುಂಬಕ್ಕೆ ಜಿಲ್ಲಾಡಳಿತ ಕಚೇರಿಯಲ್ಲಿ ರಾಜ್ಯ ಸರಕಾರದಿಂದ ನೀಡಲಾದ ೨೫ ಲಕ್ಷ ರೂಪಾಯಿಗಳ ಚೆಕ್ ಅನ್ನು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ವಿತರಿಸಿದರು.

<><*<><>*><>

ಕಳೆದ ೧೧ ವರ್ಷಗಳಲ್ಲಿ ಭಾರತದ ಕಡು ಬಡವರ ಸಂಖ್ಯೆ ಶೇಕಡ ೨೧.೧ರಿಂದ ಶೇಕಡ ೫.೩ ಕ್ಕೆ ತಗ್ಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಈ ಹಿಂದೆ ೩೪ ಕೋಟಿ ೪೪ ಲಕ್ಷ ಜನರು ಕಡು ಬಡತನದಲ್ಲಿದ್ದರು. ವಿಶ್ವ ಬ್ಯಾಂಕ್ ಅಧ್ಯಯನದ ಪ್ರಕಾರ, ೨೭ ಕೋಟಿ ಜನರು ಕಡುಬಡತನದಿಂದ ಹೊರ ಬಂದಿದ್ದಾರೆ ಎಂದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಜನೋಪಯೋಗಿ ಯೋಜನೆ ಮುಖಾಂತರ ಅನೇಕ ಜನರಿಗೆ ಉದ್ಯೋಗ ದೊರೆತಿದ್ದು, ಬಡತನದಿಂದ ಹೊರ ಬಂದಿದ್ದಾರೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದರು.

**ಧ್ವನಿ : ಪ್ರಹ್ಲಾದ್ ಜೋಶಿ, ಕೇಂದ್ರ ಸಚಿವ (೩೫ ಸೆಕೆಂಡ್ಸ್)**

<><*<><>*><>

ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಗದಗ ಜಿಲ್ಲೆಯ ಚಿಕ್ಕ ನರಗುಂದ, ಕಣಕಿಕೊಪ್ಪ, ಶಿರೋಳ, ಖಾನಾಪುರ ಮತ್ತು ಸುರಕೋಡ ಗ್ರಾಮಗಳಲ್ಲಿ ಯಶಸ್ವಿಯಾಗಿ ಜರುಗಿತು. ಹುಲಕೋಟಿಯ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಮತ್ತು ಕೃಷಿ ಇಲಾಖೆಯ ಆಶ್ರಯದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜರುಗಿತು. ಅಭಿಯಾನದಲ್ಲಿ ವಿಶೇಷವಾಗಿ ಡ್ರೋನ್ ಪ್ರಾತ್ಯಕ್ಷಿಕೆ ಖಾನಾಪೂರ ಗ್ರಾಮದಲ್ಲಿ ಜರುಗಿತು. ಡ್ರೋನ್ ಬಳಸಿ ವಿವಿಧ ಬೆಳೆಗಳಿಗೆ ಪೋಷಕಾಂಶಗಳ ಸಿಂಪಡಣಾ ವಿಧಾನವನ್ನು ರೈತರಿಗೆ ಕೃಷಿ ವಿಜ್ಞಾನಿಗಳು ವಿವರಿಸಿದರು. ಮುಂಗಾರು ಹಂಗಾಮಿನ ಅಡಿ ಅಭಿವೃದ್ಧಿಪಡಿಸಿದ ಮುಂಗಾರು ಬೆಳೆಗಳಾದ ಹೆಸರು, ಶೇಂಗಾ, ಸೂರ್ಯಕಾಂತಿ, ಗೋವಿನ ಜೋಳ, ಈರುಳ್ಳಿ ಬೆಳೆಗಳ ಕುರಿತ ಕೃಷಿ ಕೈಪಿಡಿಯನ್ನು ರೈತರಿಗೆ ವಿತರಿಸಲಾಯಿತು. ಕೇಂದ್ರದ ಕೃಷಿ ಮಂತ್ರಾಲಯದ ಮಹತ್ವದ ಕಾರ್ಯಕ್ರಮ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಜಿಲ್ಲೆಯ ಹೊಸಕೋಟೆ ತಾಲೂಕಿನ ಚೊಕ್ಕನಹಳ್ಳಿ, ದೊಡ್ಡಹುಲ್ಲೂರ್ ಗ್ರಾಮಗಳಲ್ಲಿ ನಡೆಯಿತು. ವಿಜ್ಞಾನಿ ಡಾ.ಗೋಪಾಲ್ ಮಾತನಾಡಿ, ರೈತರು ಮುಂಗಾರಿನಲ್ಲಿ ಕೃಷಿ ಚಟುವಟಿಕೆಗಳಲ್ಲಿ ಬಳಸುವ ಬೀಜೋಪಚಾರ, ರಸಗೊಬ್ಬರಗಳ ಬಳಕೆ, ರಾಸಾಯನಿಕಗಳ ಸಿಂಪಡಣೆಯ ವೇಳೆ ರೈತರು ಪಾಲಿಸಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ರೈತರಿಗೆ ಮಾಹಿತಿ ನೀಡಿದರು. ರೈತರು ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿದರು. ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲೂಕಿನ  ಗಿರಿಯಾಳ ಗ್ರಾಮದಲ್ಲಿ ಕೃಷಿ ವಿಶ್ವವಿದ್ಯಾಲಯ, ಧಾರವಾಡ ಹಾಗೂ ಕೃಷಿ ವಿಜ್ಞಾನ ಕೇಂದ್ರದ ಸಹಯೋಗದೊಂದಿಗೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯಿತು. ಸಮಗ್ರ ಕೃಷಿ, ನೈಸರ್ಗಿಕ ಕೃಷಿ, ಕೃಷಿ ಸಿಂಚಾಯಿ ಯೋಜನೆ ಮತ್ತು ಫಸಲ್ ಭೀಮಾ ಯೋಜನೆ, ಮೆಕ್ಕೆಜೋಳ ಮತ್ತು ಸೋಯಾಬೀನ್ ಹಾಗೂ ತರಕಾರಿ ಬೆಳೆಗಳಲ್ಲಿ ಕೀಟ ಮತ್ತು ರೋಗ ನಿರ್ವಹಣೆ, ಕೃಷಿಯಲ್ಲಿ ಡ್ರೋನ್ ಮತ್ತು ನ್ಯಾನೊ ತಂತ್ರಜ್ಞಾನಗಳು, ಕೃಷಿ ಯಂತ್ರೋಪಕರಣಗಳ ಪ್ರಾಮುಖ್ಯತೆ ಮತ್ತು ಕೃಷಿ ಪದ್ಧತಿಗಳಲ್ಲಿ ಶ್ರಮ ಕಡಿತ, ಪೌಷ್ಟಿಕ ತೋಟ, ಸಂಸ್ಕರಣೆ ಮತ್ತು ಮೌಲ್ಯವರ್ಧನೆ ಕುರಿತು ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ಸಹ ನಿರ್ದೇಶಕರಾದ ಡಾ.ಎಸ್.ಎ.ಗದ್ದನಕೇರಿ, ರೈತರಿಗೆ ಮಾಹಿತಿ ನೀಡಿದರು.

**<><*<><>*><>**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ 'ಬೇಟಿ ಬಚಾವೋ ಬೇಟಿ ಪಡಾವೋ' ಕುರಿತು ವಿಜಯಪುರ ನಿವಾಸಿ ರೇಷ್ಮಾ, ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.  ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎನ್ನುವ ಮಾತಿನಂತೆ,

'ಬೇಟಿ ಬಚಾವೋ ಬೇಟಿ ಪಡಾವೋ' ಕಾರ್ಯಕ್ರಮದಿಂದ ಜಾಗೃತಿ ಉಂಟಾಗಿ, ಹೆಣ್ಣು ಮಗುವಿನ ಕುರಿತು ಹೆಚ್ಚಿನ ಕಾಳಜಿ ಉಂಟಾಗಿದೆ. ಭ್ರೂಣ ಹತ್ಯೆ ನಿಂತಿದೆ ಎಂದು ಹೇಳಿದರು.  ಹೆಣ್ಣು ಮಗು ಸಹ ಗಂಡು ಮಗುವಿನಂತೆ ಸಮರ್ಥಳು. ಎಲ್ಲ ಕ್ಷೇತ್ರಗಳಲ್ಲಿಯೂ ಆಕೆ ಯಶಸ್ಸು ಸಾಧಿಸುತ್ತಿದ್ದಾಳೆ. ಜಿಲ್ಲೆಯ ಅನುಪಾತದಲ್ಲಿಯೂ ಸರಿ ಸಮವಾಗಿದೆ. ಮಹತ್ವದ ಈ ಯೋಜನೆ ಜಾರಿಗೆ ತಂದ ಕೇಂದ್ರ ಸರಕಾರಕ್ಕೆ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದಗಳು ಎಂದು ರೇಷ್ಮಾ ತಿಳಿಸಿದ್ದಾರೆ.

**ಧ್ವನಿ : ರೇಷ್ಮಾ (೧೮ ಸೆಕೆಂಡ್‌ಗಳು)**

**<><*<><>*><>**

ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಅಮೃತ್ ಮಿತ್ರ ಯೋಜನೆಗೆ ಕೋಲಾರ ಜಿಲ್ಲೆಯ ವೇಮಗಲ್ ತಾಲೂಕಿನ ಕುರುಗಲ್ ಪಟ್ಟಣ ಪಂಚಾಯಿತಿ ಆಯ್ಕೆಯಾಗಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ವೆಂಕಟೇಶ್ ತಿಳಿಸಿದ್ದಾರೆ. ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವೇಮಗಲ್ ಪಟ್ಟಣದ ಗುರು ಕೃಪ ಲೇಔಟ್‌ನಲ್ಲಿ ಅಮೃತ್ ಮಿತ್ರ ಯೋಜನೆ-೨ ಅಡಿ 'ಮರಗಳ ರಕ್ಷಣೆ ಮಹಿಳೆಯರ ವಿಶೇಷ ಅಭಿಯಾನ'ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಎಲ್ಲಾ ಸ್ವ-ಸಹಾಯ ಸಂಘಗಳು  ಆಗಸ್ಟ್ ೩೧ ರವರೆಗೆ ಸಾವಿರಾರು ಸಸಿಗಳನ್ನು ನೆಟ್ಟು, ಪೋಷಣೆ ಮಾಡಿ, ಯೋಜನೆ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

**<><*<><>*><>**

ಮಂಡ್ಯ ಜಿಲ್ಲೆಯಲ್ಲಿ ಜೂನ್ ೨೧ರಂದು ನಡೆಯುವ ೧೧ ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ವ್ಯವಸ್ಥಿತವಾಗಿ ನಡೆಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಕುಮಾರ ಸೂಚಿಸಿದ್ದಾರೆ.  ಮಂಡ್ಯ ನಗರದ ಜಿಲ್ಲಾ ತರಬೇತಿ ಸಂಸ್ಥೆಯ ಸಭಾಂಗಣದಲ್ಲಿ ಇಂದು ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಸಂಬಂಧ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಗದಿಂದ ಆರೋಗ್ಯ ವೃದ್ಧಿಯಾಗುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ಏಕಾಗ್ರತೆ ಬೆಳಸುತ್ತದೆ. ಈ ಬಾರಿಯ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು "ಒಂದು ಭೂಮಿ ಒಂದು ಆರೋಗ್ಯ" ಘೋಷ ವಾಕ್ಯದಡಿ ಆಚರಿಸಲಾಗುತ್ತಿದೆ ಎಂದರು.

**<><*<><>*><>**

ರಾಜ್ಯದಲ್ಲಿ ನೈರುತ್ಯ ಮುಂಗಾರು ಉತ್ತರ ಒಳನಾಡಿನಲ್ಲಿ ತೀವ್ರವಾಗಿದ್ದು, ದಕ್ಷಿಣ ಒಳನಾಡಿನಲ್ಲಿ ಸಕ್ರಿಯವಾಗಿದೆ. ಕರಾವಳಿಯಲ್ಲಿ ಸಾಮಾನ್ಯವಾಗಿತ್ತು. ಕರಾವಳಿ ಮತ್ತು ಉತ್ತರ ಒಳನಾಡಿನ ಹಲವೆಡೆ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಚಿತ್ರದುರ್ಗ ಜಿಲ್ಲೆಯ ಪರಶುರಾಮ್‌ಪುರದಲ್ಲಿ ಅತೀ ಹೆಚ್ಚು ೧೨ ಸೆಂಟಿ ಮೀಟರ್ ಮಳೆಯಾಗಿದೆ. ಕುಂದಾಪುರ ಮತ್ತು ಯಾದಗಿರಿ ಜಿಲ್ಲೆಯ ಕಕ್ಕೇರಿಯಲ್ಲಿ ತಲಾ ೮ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಸುತಗಟ್ಟಿ ಮಟ್ಟಿಕೊಪ್ಪ ೬, ಸಿಂಧನೂರು, ಧಾರವಾಡ ಮತ್ತು ಬಳಗಾನೂರಿನಲ್ಲಿ ತಲಾ ೫ ಸೆಂಟಿ ಮೀಟರ್ ಮಳೆಯಾಗಿದೆ.  ಮುಂದಿನ ೩ ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರಿನಲ್ಲಿ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಗರಿಷ್ಠ ತಾಪಮಾನ ೩೦ ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ ತಾಪಮಾನ ೨೧ ಡಿಗ್ರಿ ಸೆಲ್ಸಿಯಸ್ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**